ಶ್ರೀ ಸತೀಶ್ ಜಾರಕಿ ಹೊಳಿ (ರಾಜ್ಯ ಜವಳಿ ಸಚಿವರು) : ಸನ್ಮಾನ್ಯ ಅಧ್ಯಕ್ಷರೆ, ಈಗಾಗಲೇ ಚರ್ಚೆಯಾದಂತೆ ಸಹಕಾರಿ ಬ್ಯಾಂಕ್‌ಗಳಿಂದ ಸಾಲ ಪಡೆದ ನೇಕರರಿಗೆ ಮಾತ್ರ ಸಹಾಯ ಧನವನ್ನು ನೀಡುತ್ತಿದ್ದೇವೆ. ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಪಡೆದ ಸಾಲಕ್ಕೆ ಬಹುಶಃ ಕೊಡಲಿಕ್ಕೆ ಸಾಧ್ಯವಿಲ್ಲ ಎಂಬ ಮಾತನ್ನು ಹೇಳಲಿಕ್ಕೆ ಇಚ್ಛೆ ಪಡುತ್ತಿದ್ದೇನೆ. ಇನ್ನುಳಿದ ಅವರು ಕೇಳಿರುವ ಸೌಲಭ್ಯಗಳನ್ನು ಕೊಡಿಸಲಿಕ್ಕೆ ಪ್ರಾಮಾಣಿಕವಾದ ಪ್ರಯತ್ನ ಮಾಡುತ್ತೇನೆ ಎಂದು ಈ ಸಂದರ್ಭದಲ್ಲಿ ಹೇಳುತ್ತೇನೆ.

ಛೇರ್ಮನ್ : ಈಗ ಸದನವನ್ನು ನಾಳೆ ಬೆಳಿಗ್ಗೆ 11 ಗಂಟೆವರೆಗೆ ಮುಂದೂಡುತ್ತಿದ್ದೇನೆ.

(ಸದನವು ಸಂಜೆ 6 ಗಂಟೆ 34 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ:6ನೇ ಜುಲೈ 2005 ರ ಬುಧವಾರದಂದು ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ – 1

3506 (4253) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) – ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುಂದಗೋಳದಲ್ಲಿ ಹೊಸದಾಗಿ ಪೋಲಿಸ್ ಠಾಣೆಯನ್ನು ತರೆಯಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ? ಇದ್ದಲ್ಲಿ, ಅದನ್ನು ಯಾವಾಗ ಪ್ರಾರಂಭ ಮಾಡಲಾಗುವುದು ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)–

ಅ) ಈ ಕುರಿತು ಯಾವುದೇ ಪ್ರಸ್ತಾವನೆ ಸರ್ಕಾರಕ್ಕೆ ಬಂದಿರುವುದಿಲ್ಲ. ಅನ್ವಯಿಸುವುದಿಲ್ಲ.

3507 (4309) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) – ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಮಾಡಿ ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿಗೆ ಒಂದು ಹೊಸ ಕೆ.ಎಸ್.ಆರ್.ಟಿ.ಸಿ.ಬಸ್ ಡಿಪೋ ಮಂಜೂರು ಆಗಿದೆಯೇ ;

ಆ) ಬಸ್ ಡಿಪೋ ಮಂಜೂರು ಆಗಿದ್ದರೆ ಅದನ್ನು ಯಾವಾಗ ಪ್ರಾರಂಭಿಸಲಾಗುವುದು ;